## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳಿಗೆ ಉನ್ನತ ಶಿಕ್ಷಣ ವ್ಯಾಸಂಗಕ್ಕೆ ನಿಯೋಜಿಸುವ ಅಧಿಕಾರವನ್ನು ಪ್ರತ್ಯಾಯೋಜಿಸುವ ಬಗ್ಗೆ.

ಓದಲಾಗಿದೆ: ಸರ್ಕಾರಿ ಆದೇಶ ಸಂಖ್ಯೆ: ಎಫ್.ಡಿ 04 ಟಿ.ಎಫ್.ಪಿ 2001, ದಿನಾಂಕ 27/06/2001.

ಪ್ರಸ್ತಾವನೆ:

ಮೇಲೆ ಓದಲಾದ(1) ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ 61ರಡಿ ಭಾರತದೊಳಗೆ ನಡೆಯುವ ತರಬೇತಿ ಅಥವಾ ವ್ಯಾಸಂಗಕ್ಕೆ ನಿಯೋಜಿಸುವ ವಿಶೇಷ ಅಧಿಕಾರವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತರಿಗೆ ವಿಶೇಷ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

ಸರ್ಕಾರದ ಮುಖ್ಯ ಕಾರ್ಯದರ್ಶಿ ಇವರ ಅಧ್ಯಕ್ಷತೆಯಲ್ಲಿ ದಿನಾಂಕ 05/04/2019 ರಂದು ಜರುಗಿದ ಸಭೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರಿ ವೈದ್ಯರುಗಳನ್ನು ಕರ್ನಾಟಕ ನಾಗರೀಕ ಸೇವಾ ನಿಯಮ 61ರ ಪರಿಶಿಷ್ಟ-IIಎ 1 ರಲ್ಲಿನ ಷರತ್ತನ್ನು ಸಡಿಲಿಸಿ ಪರಿವೀಕ್ಷಣಾವಧಿ ಪೂರೈಸಿದ ವೈದ್ಯರುಗಳನ್ನು ಉನ್ನತ ವ್ಯಾಸಂಗಕ್ಕೆ ಪ್ರತಿನಿಯೋಜಿಸುವ ಅಧಿಕಾರವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸುವ ಬಗ್ಗೆ ನಿರ್ಣಯಿಸಲಾಯಿತು. ಈ ಕೆಳಕಂಡಂತೆ ಆದೇಶ:

**ಸರ್ಕಾರಿ ಆದೇಶ ಸಂಖ್ಯೆ: ಎಫ್.ಡಿ 02 ಸನಿತಿ 2019, ಬೆಂಗಳೂರು, ದಿನಾಂಕ: 07/06/2019**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರಿ ವೈದ್ಯರುಗಳನ್ನು ಕರ್ನಾಟಕ ನಾಗರೀಕ ಸೇವಾ ನಿಯಮ 61ರ ಪರಿಶಿಷ್ಟ-IIಎ I ರಲ್ಲಿನ ಷರತ್ತನ್ನು ಸಡಿಲಿಸಿ, ಈ ಕೆಳಕಂಡ ಷರತ್ತಿಗೊಳಪಟ್ಟು ಪರಿವೀಕ್ಷಣಾವಧಿ ಪೂರೈಸಿದ ವೈದ್ಯರುಗಳನ್ನು ಉನ್ನತ ಶಿಕ್ಷಣ ವ್ಯಾಸಂಗಕ್ಕೆ ನಿಯೋಜಿಸುವ ಅಧಿಕಾರವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿದೆ.

1. ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ಪರಿಶಿಷ್ಟ-II ಎ ರಲ್ಲಿ ತಿಳಿಸಿದಂತೆ ನಮೂನೆ 19 ರಲ್ಲಿ ಕೆಳಕಂಡ ಅಂಶಗಳನ್ನು ಒಳಗೊಂಡ ಒಂದು ಬಂಧಪತ್ರವನ್ನು ಹಾಗೂ ಸೇವಾನಿರತ ಕೋಟಾದ ವೈದ್ಯರುಗಳಿಗೆ ಅನ್ವಯವಾಗುವ Karnataka Conduct of Entrace Test for Selection and admission to post graduate Medical and Dental Degree and Diploma Courses Rules 2006 ಮತ್ತು ತಿದ್ದುಪಡಿ ನಿಯಮ 2011 ರಲ್ಲಿನ ಅಂಶಗಳನ್ನೊಳಗೊಂಡ ಪೆನಾಲ್ಟಿ ಬಾಂಡ್ ಸಲ್ಲಿಸತಕ್ಕದ್ದು.

2/-

2. ಸ್ನಾತಕೋತ್ತರ ವ್ಯಾಸಂಗದ ನಂತರ ಕನಿಷ್ಠ 10 ವರ್ಷಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸೇವೆ ಸಲ್ಲಿಸುವುದಾಗಿ ಬಾಂಡ್ ಮೇಲೆ ಸಹಿ ಮಾಡಿ ಸಲ್ಲಿಸುವುದು ಹಾಗೂ ಈ ಅವಧಿಯಲ್ಲಿ ಸ್ವಯಂ ನಿವೃತ್ತಿಗಾಗಿ ಅಥವಾ ಅನ್ಯ ಇಲಾಖೆ/ಮಂಡಳಿ/ನಿಗಮಗಳಿಗೆ (ವೈದ್ಯಕೀಯ ಶಿಕ್ಷಣ ಇಲಾಖೆ ಸೇರಿದಂತೆ) ನಿಯೋಜನೆ ಮೇಲೆ ಕಳುಹಿಸುವಂತೆ ಕೋರಿಕೆ ಸಲ್ಲಿಸಲು ಅವಕಾಶವಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಬಿ. ಹೇಮಣ್ಣ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1)
(ದೂ.ಸಂ. 080-22033329)

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರು.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಜಿಲ್ಲಾ ಪಂಚಾಯಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
7. ಮಹಾಲೇಖಪಾಲರು (ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
9. ರಿಜಿಸ್ಟ್ರಾರ್, ಜನರಲ್ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
14. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
15. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
16. ಸಂಕಲನಕಾರರು, ಕರ್ನಾಟಕ ಗೆಜೆಟೆಡ್, ಮುಂದಿನ ಪ್ರಕರಣಗಳಲ್ಲಿ ಪ್ರಕಟಿಸುವುದಕ್ಕಾಗಿ.
17. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
18. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
19. ವಾರಪತ್ರ/ಶಾಖೆಯ ರಕ್ಷಾ ಕಡತ

ಗಣಕ ಯಂತ್ರ ಶಾಖೆ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ <u>www.finance.kar.nic.in</u> ವೀಕ್ಷಿಸಿ (ಕ್ರಮ ಸಂಖ್ಯೆ: 6 ರಿಂದ 14 ರವರೆಗೆ ಪತ್ರದ ಮೂಲಕ)**